# All India Radio: Bangalore
# Regional Bulletin In Kannada
# 05.06.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

1. ಬೆಂಗಳೂರಿನ ಕಾಲ್ತುಳಿತ ಪ್ರಕರಣ ; ಭದ್ರತೆಯ ಕುರಿತು ವರದಿ ನೀಡುವಂತೆ ಸರ್ಕಾರಕ್ಕೆ ಸೂಚನೆ ನೀಡಿದ ಉಚ್ಚ ನ್ಯಾಯಾಲಯ
2. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ದುರಂತ ಕುರಿತಂತೆ ಪರಿಶೀಲನೆ ; ನ್ಯಾಯಾಂಗ ತನಿಖೆಗೆ ಬಿಜೆಪಿ ಆಗ್ರಹ
3. ಬೆಂಗಳೂರು-ಬೆಳಗಾವಿಯಲ್ಲಿ ಅಗ್ನಿವೀರರಿಂದ ನಿರ್ಗಮನ ಪಥಸಂಚಲನ
4. ವಿಜಯಪುರದ ಆಲಮಟ್ಟಿ ಜಲ ವಿದ್ಯುದಾಗಾರದಲ್ಲಿ ವಿದ್ಯುತ್ ಉತ್ಪಾದನೆ ಆರಂಭ
5. ಇಂದು ವಿಶ್ವ ಪರಿಸರ ದಿನ ; ರಾಜ್ಯದ ವಿವಿಧೆಡೆ ಪ್ಲಾಸ್ಟಿಕ್ ಮುಕ್ತ ಅಭಿಯಾನ

<><><><>

ಆರ್.ಸಿ.ಬಿ. ವಿಜಯೋತ್ಸವದ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ೧೧ ಜನರು ಸಾವನ್ನಪ್ಪಿದ ಪ್ರಕರಣದ ಕುರಿತು ಹೈಕೋರ್ಟ್ ಸ್ವಯಂ ಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ದಾಖಲಿಸಿಕೊಂಡಿದೆ. ಇದೇ ವೇಳೆ ರಾಜ್ಯ ಸರ್ಕಾರಕ್ಕೆ ಸೂಕ್ತ ವರದಿ ನೀಡುವಂತೆ ನ್ಯಾಯಾಲಯ ಸೂಚಿಸಿದೆ. ಮಾಧ್ಯಮಗಳು ಹಾಗೂ ವಕೀಲರಿಂದ ಘಟನೆಯ ಬಗ್ಗೆ ಮಾಹಿತಿ ಪಡೆದ ಬಳಿಕ ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ.ಕಾಮೇಶ್ವರ ರಾವ್ ಅವರಿದ್ದ ನ್ಯಾಯಪೀಠ ಸ್ವಯಂಪ್ರೇರಿತ ಪ್ರಕರಣ ದಾಖಲಿಸಲು ಆದೇಶಿಸಿತು. ಮಧ್ಯಾಹ್ನ ೨.೩೦ಕ್ಕೆ ವಿಚಾರಣೆಯನ್ನು ನಿಗದಿಪಡಿಸಿದ್ದು, ಸರ್ಕಾರ ಕೈಗೊಂಡಿದ್ದ ಭದ್ರತಾ ಕ್ರಮಗಳ ಬಗ್ಗೆ ಸಮಗ್ರ ಮಾಹಿತಿ ನೀಡುವಂತೆ ರಾಜ್ಯ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರಿಗೆ ಸೂಚನೆ ನೀಡಿದೆ. ಈ ನಡುವೆ ಘಟನೆಯಲ್ಲಿ ಮೃತಪಟ್ಟ ೧೧ ಮಂದಿಯ ಮೃತ ದೇಹಗಳನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ. ಸರ್ಕಾರ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಿದ್ದು ತನಿಖಾಧಿಕಾರಿಯನ್ನಾಗಿ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್

ಅವರನ್ನು ನೇಮಿಸಲಾಗಿದೆ. ೧೫ ದಿನಗಳಲ್ಲಿ ವರದಿ ಸಲ್ಲಿಸುವಂತೆ ಸರ್ಕಾರ ಸೂಚನೆ ನೀಡಿದೆ. ಇದೇ ವೇಳೆ ಸರ್ಕಾರ ಸಾವನ್ನಪ್ಪಿದ ೧೧ ಮಂದಿಯ ವಿವರಗಳನ್ನು ಬಿಡುಗಡೆ ಮಾಡಿದೆ. ಮೃತರಲ್ಲಿ ಓರ್ವ ತಮಿಳುನಾಡಿನವರಾಗಿದ್ದು, ಉಳಿದವರು ಬೆಂಗಳೂರು ಮತ್ತು ರಾಜ್ಯ ವಿವಿಧ ಜಿಲ್ಲೆಗಳಿಗೆ ಸೇರಿದವರಾಗಿದ್ದಾರೆ.

<><><><>

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆ.ಎಸ್.ಸಿ.ಎ. ಅಧಿಕಾರಿಗಳ ವಿರುದ್ಧ ಕಬ್ಬನ್‌ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಸಾಮಾಜಿಕ ಹೋರಾಟಗಾರ ಸ್ನೇಹಮಹಿ ಕೃಷ್ಣ, ಸರ್ಕಾರ ಕ್ರೀಡಾಂಗಣದಲ್ಲಿ ವಿಜಯೋತ್ಸವ ಆಚರಿಸಿ ದುಡುಕಿನ ನಿರ್ಧಾರ ಕೈಗೊಂಡು ಭದ್ರತೆಯ ನಿರ್ಲಕ್ಷ್ಯ ತೋರಿಸಿ ೧೧ ಮಂದಿಯ ಸಾವಿಗೆ ಕಾರಣವಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

<><><><>

ದುರಂತ ನಡೆದ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಇಂದು ಗೃಹ ಸಚಿವ ಪರಮೇಶ್ವರ್ ಪರಿಶೀಲನೆ ನಡೆಸಿದ್ದಾರೆ. ಇದೇ ವೇಳೆ ಘಟನೆ ಕುರಿತಂತೆ ಪೊಲೀಸ್ ಅಧಿಕಾರಿಗಳು ಹಾಗೂ ಕೆ.ಎಸ್.ಸಿ.ಎ. ಅಧಿಕಾರಿಗಳೊಂದಿಗೆ ಮಾಹಿತಿ ಪಡೆದುಕೊಂಡಿದ್ದಾರೆ. ಬಳಿಕ ಮಾತನಾಡಿದ ಅವರು, ಗೇಟ್ ನಂ. ೧೬, ೧೭, ೧೮, ೨೧ ರಲ್ಲಿ ಕಾಲ್ತುಳಿತ ಸಂಭವಿಸಿದೆ ಎಂದು ತಿಳಿಸಿದ್ದಾರೆ. ಇನ್ನು ಮುಂದೆ ದೊಡ್ಡ ಮಟ್ಟದ ಸಮಾರಂಭ, ವಿಜಯೋತ್ಸವ ಕಾರ್ಯಕ್ರಮಗಳಿಗೆ ಹೊಸ ಪ್ರಮಾಣಿತ ಕಾರ್ಯಾಚರಣೆ ವಿಧಾನ ಎಸ್‌ಒಪಿ ಮಾಡಲಾಗುವುದು ಎಂದು ತಿಳಿಸಿದ್ದಾರೆ. ದುರಂತಕ್ಕೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಉಂಟಾದ ಸಾವು-ನೋವಿನ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗದ್ಗದಿತರಾಗಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬದುಕಿ ಬಾಳಬೇಕಿದ್ದ ಮಕ್ಕಳು, ಕಾಲ್ತುಳಿತಕ್ಕೆ ಬಲಿಯಾಗಿರುವುದನ್ನು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ. ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಲೋಪದೋಷ ಸರಿಪಡಿಸಲಾಗುವುದು ಎಂದು

ಹೇಳಿದ್ದಾರೆ. ಘಟನೆಯಿಂದ ಬೆಂಗಳೂರು ಹಾಗೂ ರಾಜ್ಯದ ಘನತೆಗೆ ಧಕ್ಕೆಯಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್ (೩೧ ಸೆಕೆಂಡ್‌ಗಳು)**

<><><>

ಕಾಲ್ತುಳಿತ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ವಹಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನಲ್ಲಿನ ಒತ್ತಾಯಿಸಿದ್ದಾರೆ. ಸರ್ಕಾರವೇ ಈ ದುರಂತದ ಹೊಣೆ ಹೊತ್ತು ಮೃತರ ಕುಟುಂಬಕ್ಕೆ ೫೦ ಲಕ್ಷ ಪರಿಹಾರ ನೀಡುವಂತೆ ಆಗ್ರಹಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ಆರ್‌ಸಿಬಿ ಆಟಗಾರರನ್ನು ವಿಧಾನಸೌಧಕ್ಕೆ ಕರೆದುಕೊಂಡು ಬಂದಿದ್ದು, ಯಾರು ಎಂದು ಪ್ರಶ್ನಿಸಿದ್ದಾರೆ. ರಾಜ್ಯ ಸರ್ಕಾರ ನಿರ್ಲಕ್ಷ್ಯದಿಂದ ಆರ್.ಸಿ.ಬಿ ಸಂಭ್ರಮಾಚರಣೆ ವೇಳೆ ಕಾಲ್ತುಳಿತ ಉಂಟಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಚಿಕ್ಕಮಗಳೂರಿನಲ್ಲಿ ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೃತಪಟ್ಟವರಿಗೆ ೨೫ ಲಕ್ಷ ರೂಪಾಯಿ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

<><><>

ಬೆಂಗಳೂರಿನ ಎಂಇಜಿ ಕೇಂದ್ರದಲ್ಲಿ ಇಂದು ೫೬೮ ಅಗ್ನಿವೀರರ ನಿರ್ಗಮನ ಪಥಸಂಚಲನ ನಡೆಯಿತು. ಎಂಇಜಿ ಸೆಂಟರ್‌ನ ಕಮಾಂಡೆಂಟ್ ಬ್ರಿಗೇಡಿಯರ್ ಅಜಯ್ ಸಿಂಗ್ ಠಾಕೂರ್, ಅಗ್ನಿವೀರರಿಂದ ಗೌರವ ವಂದನೆ ಸ್ವೀಕರಿಸಿದರು. ತರಬೇತಿ ವೇಳೆ ಉತ್ತಮ ಪ್ರದರ್ಶನ ನೀಡಿದ ಅಗ್ನಿವೀರರಿಗೆ ಪದಕ ಪ್ರದಾನ ಮಾಡಲಾಯಿತು.  ಬೆಳಗಾವಿಯ ಮರಾಠಾ ಲೈಟ್ ಇನ್ಫೆಂಟ್ರಿ ರೆಜಿಮೆಂಟ್‌ಲ್ ಕೇಂದ್ರದಲ್ಲಿ ೩೧ ವಾರಗಳ ಕಾಲ ಸೈನಿಕ ತರಬೇತಿ ಪಡೆದ ೬೫೯ ಅಗ್ನಿವೀರ ಸೈನಿಕರ ತಂಡದ ನಿರ್ಗಮನ ಪಥ ಸಂಚಲನ ಮರಾಠಿ ಲಘು ಪದಾತಿದಳ ಮೈದಾನದಲ್ಲಿ ಜುರುಗಿತು. ಎಂಎಲ್‌ಆಯ್‌ಆರ್‌ಸಿ ಕಮಾಂಡೆಂಟ್ ಬ್ರಿಗೇಡಿಯರ್ ಜಾಯ್‌ದೀಪ ಮುಖರ್ಜಿ ಗೌರವ ವಂದನೆ ಸ್ವೀಕರಿಸಿದರು.

<><><>

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಜಲ ವಿದ್ಯುದಾಗಾರದಲ್ಲಿ ವಿದ್ಯುತ್ ಉತ್ಪಾದನೆ ಆರಂಭವಾಗಿದೆ. ೫೫ ಮೆಗಾವ್ಯಾಟ್  ಸಾಮರ್ಥ್ಯದ ೫ ಘಟಕಗಳು, ಹಾಗೂ ೧೫ ಮೆಗಾವ್ಯಾಟ್ ಸಾಮರ್ಥ್ಯದ ಒಂದು ಘಟಕ ಸೇರಿ ಒಟ್ಟು ೬ ಘಟಕಗಳಿವೆ. ೨೯೦ ಮೆಗಾವ್ಯಾಟ್

ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಆಲಮಟ್ಟಿ ಕೆಪಿಸಿಎಲ್ ಹೊಂದಿದೆ. ವಿದ್ಯುತ್ ಘಟಕದ ಎಲ್ಲಾ ಆರೂ ಘಟಕಗಳು ಕಾರ್ಯಾರಂಭ ಮಾಡಲು ಜಲಾಶಯದಿಂದ ೪೫ ಸಾವಿರ ಕ್ಯುಸೆಕ್ ನೀರನ್ನು ಹರಿಸಬೇಕಾಗುತ್ತದೆ. ಏಪ್ರಿಲ್ ೨೦೨೫ರಿಂದ ಮಾರ್ಚ್ ೨೦೨೬ನೇ ಸಾಲಿಗೆ ೫೧೦೦ ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯ ಗುರಿ ನೀಡಲಾಗಿದೆ.

<><><>

ಇಂದು ವಿಶ್ವ ಪರಿಸರ ದಿನ. ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಸೇರಿದಂತೆ ಹಲವು ಗಣ್ಯರು ಪರಿಸರ ದಿನದ ಶುಭಾಶಯ ಕೋರಿದ್ದಾರೆ. ಹಸಿರು ಪಥ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆಯ ಜಿಲ್ಲಾ ಮುಖ್ಯ ರಸ್ತೆ ಮತ್ತು ಗ್ರಾಮೀಣ ರಸ್ತೆಗಳ ಎರಡೂ ಬದುಗಳಲ್ಲಿ ೧೧೩ ಕಿಲೋಮೀಟರ್ ದೂರದವರೆಗೆ ಸಸಿ ನೆಡಲಾಗುವುದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.

**ಧ್ವನಿ : ಡಾ.ಸುರೇಶ್ ಇಟ್ನಾಳ್ (೨೮ ಸೆಕೆಂಡ್‌ಗಳು)**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆ ಇಂದು ಪ್ಲಾಸ್ಟಿಕ್ ಮಾಲಿನ್ಯ ಹೊಡೆದೋಡಿಸೋಣ ಧ್ಯೇಯವಾಕ್ಯದೊಂದಿಗೆ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅರಣ್ಯ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಪರಿಸರ ದಿನ ಆಚರಿಸಲಾಯಿತು. ಶಾಲಾ ವಿದ್ಯಾರ್ಥಿಗಳಿಂದ ಪರಿಸರ ಜಾಗೃತಿ ಜಾಥಾ ನಡೆಯಿತು ರಾಜ್ಯದ ಹಲವೆಡೆ ಪ್ಲಾಸ್ಟಿಕ್ ಮುಕ್ತ ಅಭಿಯಾನ ನಡೆಯಿತು.

<><><>

ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ನಡೆಯುತ್ತಿದೆ. ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಮತ್ತು ಕೃಷಿ ಇಲಾಖೆ ಸಹಯೋಗದಲ್ಲಿ ಹಲವು ಗ್ರಾಮಗಳಲ್ಲಿ ಯಶಸ್ವಿಯಾಗಿ ಕೃಷಿ ಅಭಿಯಾನ ಜರುಗಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕೊಪ್ಪಳ ಜಿಲ್ಲೆಯ ಅಳವಂಡಿ ಹೋಬಳಿಯ ಹಲಗೇರಿ ಗ್ರಾಮದಲ್ಲಿ ಇಂದು ನಡೆಯಿತು. ಗಂಗಾವತಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ರಾಘವೇಂದ್ರ ಎಲಿಗಾರ್ ಮಾತನಾಡಿ ರೈತರು ವಿಜ್ಞಾನಿಗಳಿಂದ ಮಾಹಿತಿ ಪಡೆಯುವಂತೆ ಸಲಹೆ ನೀಡಿದರು.

**ಧ್ವನಿ : ಡಾ.ರಾಘವೇಂದ್ರ ಎಲಿಗಾರ. ಮುಖ್ಯ ಸ್ಥರು ಕೆ.ವಿ.ಕೆ ಗಂಗಾವತಿ (೨೯ ಸೆಕೆಂಡ್‌ಗಳು)**

ಬಳ್ಳಾರಿಯಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯುತ್ತಿದ್ದು, ಹೊಸ ತಳಿಗಳು, ಮಣ್ಣು ಪರೀಕ್ಷೆ ರಸ ಗೊಬ್ಬರ ಮತ್ತು ಜೈವಿಕ ಗೊಬ್ಬರದ ಬಳಕೆ, ಬೀಜೋಪಚಾರ ಕೀಟಗಳ ನಿಯಂತ್ರಣ ಕುರಿತು ಕೃಷಿ ವಿಜ್ಞಾನಿಗಳು ರೈತರಿಗೆ ಮಾಹಿತಿ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>